# ಕರ್ನಾಟಕ ವಿಧಾನ ಪರಿಷತ್

| | |
|---|---|
| ಮಾನ್ಯ ಸದಸ್ಯರ ಹೆಸರು | ಡಾ|| ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1276 |
| ಉತ್ತರಿಸಬೇಕಾದ ದಿನಾಂಕ | 19.03.2025 |
| ಉತ್ತರಿಸಬೇಕಾದ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು |

| | ಮಾನ್ಯ ಸದಸ್ಯರ ಪ್ರಶ್ನೆ | ಉತ್ತರ |
|---|---|---|
| | ಕಲಬುರಗಿ ಜಿಲ್ಲೆಯ ಚಿತ್ತಾಪುರ ಪಟ್ಟಣದ ನಾಗಾವಿ ಪ್ರದೇಶದಲ್ಲಿ ಬಡವರಿಗಾಗಿ ರೂ.58 ಕೋಟಿ ವೆಚ್ಚದಲ್ಲಿ 1,000 ಮನೆಗಳನ್ನು ಇನ್ನು ಹಂಚಿಕೆ ಮಾಡದಿರಲು ಕಾರಣಗಳೇನು; | ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಕಲಬುರಗಿ ಜಿಲ್ಲೆಯ ಚಿತ್ತಾಪುರ ಪಟ್ಟಣದ ನಾಗಾವಿ ಪ್ರದೇಶದಲ್ಲಿ ರೂ. 55.78 ಕೋಟಿಗಳ ಯೋಜನಾ ವೆಚ್ಚದಲ್ಲಿ 1000(ಜಿ+1) ಮನೆಗಳ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿದೆ.<br><br>ಫಲಾನುಭವಿಗಳಿಗೆ ಈಗಾಗಲೇ ತಾತ್ಕಾಲಿಕ ಹಂಚಿಕೆ ಪತ್ರಗಳನ್ನು ವಿತರಿಸಲಾಗಿರುತ್ತದೆ. |
| | 1000 ಮನೆಗಳು ಮೂಲಭೂತ ಸೌಕರ್ಯ ಗಳೊಂದಿಗೆ ಸಿದ್ಧವಾಗಿದ್ದರೂ ಮನೆಗಳನ್ನು ಬಡವರಿಗೆ ಹಂಚಿಕೆ ಮಾಡಿ ಹಕ್ಕು ಪತ್ರಗಳನ್ನು ನೀಡಲು ಯಾವಾಗ ಕ್ರಮ ಕೈಗೊಳ್ಳಲಾಗುವುದು; | ಸದರಿ 1000(ಜಿ+1) ಮನೆಗಳ ನಿರ್ಮಾಣ ಕಾಮಗಾರಿಗಳು ಪೂರ್ಣಗೊಂಡಿದ್ದು, ಮೂಲಭೂತ ಸೌಲಭ್ಯ ಕಾಮಗಾರಿ ಪ್ರಗತಿಯಲ್ಲಿದ್ದು, ಪೂರ್ಣಗೊಂಡ ನಂತರ ಮನೆಗಳನ್ನು ನಿಯಮಗಳ ಪ್ರಕಾರ ಹಂಚಿಕೆ ಮಾಡಿ ಹಕ್ಕುಪತ್ರ ನೀಡಲಾಗುವುದು. |
| | ಮನೆಗಳು ನಿರ್ಮಾಣಗೊಂಡು ಹಂಚಿಕೆಯಾಗದಿರುವುದರಿಂದ ಅದೇ ಮನೆಗಳಲ್ಲಿ ಬಾಗಿಲುಗಳನ್ನು ಒಡೆದು ದುರುಪಯೋಗ ಪಡಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ; | ಚಿತ್ತಾಪುರ ಪಟ್ಟಣದಲ್ಲಿ 1000(ಜಿ+1) ನಿರ್ಮಿಸಿರುವ ಎಲ್ಲಾ ಮನೆಗಳು ಉತ್ತಮ ಸ್ಥಿತಿಯಲ್ಲಿರುತ್ತದೆ. |
| ) | ಬದುಕಲು ಸೂರಿಲ್ಲದೆ ಕೊಳಗೇರಿಯಲ್ಲಿ ಬದುಕುತ್ತಿರುವ ಬಡ ಕುಟುಂಬಗಳಿಗೆ ಹಂಚಿ ಸರಕಾರವು ನ್ಯಾಯ ಒದಗಿಸಲು ತಕ್ಷಣವೇ ಕ್ರಮ ಕೈಗೊಳ್ಳಲಾಗುವುದೇ? | ಮೂಲಭೂತ ಸೌಲಭ್ಯ ಕಾಮಗಾರಿಗಳು ಪೂರ್ಣಗೊಂಡ ನಂತರ, ಅನುಮೋದಿತ ಫಲಾನುಭವಿಗಳಿಗೆ ಶೀಘ್ರವಾಗಿ ಮನೆಗಳನ್ನು ಹಂಚಿಕೆ ಮಾಡಲಾಗುವುದು. |

ಂಖ್ಯೆ: ವಇ 57 ಹೆಚ್‌ಎಫ್ಎ 2025]

(ಬಿ.ಝೆಡ್ ಜಮೀರ್ ಅಹಮದ್ ಖಾನ್)
ವಸತಿ, ವಕ್ಫ್, ಮತ್ತು ಅಲ್ಪ ಸಂಖ್ಯಾತರ